**Akashvani : Bangalore**
**Regional Bulletin In Kannada**
**25.05.2024 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

## ಮುಖ್ಯಾಂಶಗಳು

೧. ಆರನೇ ಹಂತದ ಲೋಕಸಭಾ ಚುನಾವಣೆ ಮತದಾನ ಶಾಂತಿಯುತ

೨. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು ವಿಶೇಷ ಒತ್ತು - ಮುಖ್ಯಮಂತ್ರಿ ಸಿದ್ದರಾಮಯ್ಯ

೩. ರಾಜ್ಯದ ಕರಾವಳಿ, ದಕ್ಷಿಣ ಒಳನಾಡಿನಲ್ಲಿ ಭಾರೀ ಮಳೆ ದಾಖಲು

೪. ಐಪಿಎಲ್ ಕ್ರಿಕೆಟ್ : ನಾಳೆ ನಡೆಯಲಿರುವ ಫೈನಲ್ ಪಂದ್ಯದಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್-ಸನ್‌ರೈಸರ್ಸ್ ಹೈದರಾಬಾದ್ ಹಣಾಹಣಿ

**<><*<><>*><>**

ದೇಶದಲ್ಲಿ ಲೋಕಸಭಾ ಚುನಾವಣೆಯ ೬ನೇ ಹಂತಕ್ಕಾಗಿ ಇಂದು ನಡೆದ ಮತದಾನ ಶಾಂತಿಯುತವಾಗಿ ಮುಕ್ತಾಯವಾಗಿದೆ. ಈ ಹಂತದಲ್ಲಿ ೮ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶ ಒಳಗೊಂಡಂತೆ ಒಟ್ಟು ೫೮ ಲೋಕಸಭಾ ಕ್ಷೇತ್ರಗಳಲ್ಲಿ ಮತದಾನ ನಡೆಯಿತು. ೫ ಗಂಟೆಯ ವೇಳೆಗೆ ಬಂದ ವರದಿಯ ಪ್ರಕಾರ, ೬ನೇ ಹಂತದ ೫೮ ಕ್ಷೇತ್ರಗಳಲ್ಲಿ ಒಟ್ಟಾರೆ ಶೇಕಡ ೫೭.೭೦ ರಷ್ಟು ಮತದಾನವಾಗಿದೆ. ಬಿಹಾರದಲ್ಲಿ ಶೇಕಡ ೫೨.೨೪, ಜಾರ್ಖಂಡ್‌ನಲ್ಲಿ ಶೇಕಡ ೬೧.೪೧, ಹರ್ಯಾಣzಲ್ಲಿ ಶೇಕಡ ೫೫.೯೩, ಒಡಿಶಾದಲ್ಲಿ ಶೇಕಡ ೫೯.೬೦, ಉತ್ತರಪ್ರದೇಶದಲ್ಲಿ ೫೨.೦೨ ಮತ್ತು ಪಶ್ಚಿಮಬಂಗಾಳದಲ್ಲಿ ೭೭.೯೯, ದೆಹಲಿಯಲ್ಲಿ ೫೩.೭೩ ಹಾಗೂ ಜಮ್ಮು-ಕಾಶ್ಮೀರದಲ್ಲಿ ಶೇಕಡ ೫೧.೩೫ರಷ್ಟು ಮತದಾನವಾಗಿದೆ.

**<><*<><>*><>**

ಚನ್ನಗಿರಿಯಲ್ಲಿ ಪೊಲೀಸ್ ವಶದಲ್ಲಿ ಆರೋಪಿ ಸಾವನ್ನಪ್ಪಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸ್ ಅಧಿಕಾರಿಗಳನ್ನು ಅಮಾನತು ಮಾಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಆರೋಪಿಗೆ ಮೂರ್ಛೆ ರೋಗವಿರುವ ಕಾರಣದಿಂದ ಆತ ಮೃತಪಟ್ಟಿದ್ದಾನೆ ಎಂದು ಸ್ಪಷ್ಟಪಡಿಸಿದರು. ಇದೇ ವೇಳೆ ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಆರೋಪಕ್ಕೆ ಪ್ರತಿಕ್ರಿಯಿಸಿದ ಸಿದ್ದರಾಮಯ್ಯ, ನನ್ನ ಪುತ್ರ ರಾಕೇಶ್ ಮರಣ ಹೊಂದಿದ್ದು ೮ ವರ್ಷಗಳ ಹಿಂದೆ ೨೦೧೬ರಲ್ಲಿ. ರಾಕೇಶ್ ಮತ್ತು ಪ್ರಜ್ವಲ್ ಪ್ರಕರಣಗಳಲ್ಲಿ ಯಾವ ಸಾಮ್ಯತೆ ಇದೆ. ರಾಕೇಶ್ ಹೆಸರು ಉಲ್ಲೇಖಿಸುವುದು ಮೂರ್ಖತನ ಎಂದು ಹೇಳಿದ್ದಾರೆ. ಧರ್ಮಸ್ಥಳಕ್ಕೆ ತೆರಳುವ ಮುನ್ನ ಮಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು ವಿಶೇಷ ಒತ್ತು ನೀಡಲಾಗಿದೆ ಎಂದರು. ಬೆಳ್ತಂಗಡಿ ಶಾಸಕ ಹರೀಶ್ ಪೂಂಜಾ ಪೊಲೀಸರಿಗೆ ಬೆದರಿಕೆ ಹಾಕಿದ ಪ್ರಕರಣಕ್ಕೆ

ಸಂಬಂಧಿಸಿದಂತೆ ಕಾನೂನಿನ ಪ್ರಕಾರ ಎಫ್‌ಐಆರ್ ದಾಖಲಿಸಲಾಗಿದ್ದು, ಪೊಲೀಸರು ತನಿಖೆ ನಡೆಸಲಿದ್ದಾರೆ. ಕಾನೂನು ಎಲ್ಲರಿಗೂ ಒಂದೇ. ಹರೀಶ್ ಪೂಂಜಾ ಶಾಸಕರೆಂಬ ಮಾತ್ರಕ್ಕೆ ಅವರ ಮೇಲಿನ ಆರೋಪವನ್ನು ಅಲ್ಲಗೆಳೆಯಲು ಸಾಧ್ಯವಿಲ್ಲ ಎಂದು ಹೇಳಿದರು.

**<><*<><>*><>**

ದಾವಣಗೆರೆ ಜಿಲ್ಲೆಯ ಚೆನ್ನಗಿರಿಯಲ್ಲಿ ಪೊಲೀಸ್ ವಶದಲ್ಲಿದ್ದ ಆರೋಪಿ ಆದಿಲ್ ಸಾವಿನ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಗಳೂರಿನಲ್ಲಿಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಸ್ಪಷ್ಟನೆ ನೀಡಿದ್ದು, ದೂರಿನ ಬೆನ್ನಲ್ಲೇ ಆದಿಲ್‌ನನ್ನು ಪೊಲೀಸರು ಠಾಣೆಗೆ ಕರೆತಂದಿದ್ದಾರೆ. ಕರೆತಂದ ಕೆಲವೇ ನಿಮಿಷದಲ್ಲೇ ಆರೋಗ್ಯದಲ್ಲಿ ಏರುಪೇರಾಗಿ ಸಾವನ್ನಪ್ಪಿದ್ದಾನೆ. ಮರಣೋತ್ತರ ಪರೀಕ್ಷೆಯ ನಂತರ ಸಾವಿಗೆ ಕಾರಣ ತಿಳಿದುಬರಲಿದೆ ಎಂದು ಹೇಳಿದ್ದಾರೆ. ಆದಿಲ್ ಸಾವು ಬೆನ್ನಲ್ಲೇ ರೊಚ್ಚಿಗೆದ್ದ ಜನರು, ಪೊಲೀಸ್ ಠಾಣೆ ಮೇಲೆ ದಾಳಿ ನಡೆಸಿದ್ದಾರೆ. ಚೆನ್ನಗಿರಿಯಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಗಿದೆ. ಈ ಹಿನ್ನಲೆಯಲ್ಲಿ ಅಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದೆ ಎಂದು ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ.

**<><*<><>*><>**

ರಾಜ್ಯದಲ್ಲಿ ಪೊಲೀಸರಿಗೇ ರಕ್ಷಣೆ ಇಲ್ಲದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಮಾಜಿ ಸಚಿವ ಅರಗ ಜ್ಞಾನೇಂದ್ರ ದೂರಿದರು. ಶಿವಮೊಗ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪೊಲೀಸರ ಬಗ್ಗೆ ಅಪರಾಧಿಗಳಿಗೆ ಭಯ ಇಲ್ಲ. ಪೊಲೀಸ್ ವ್ಯವಸ್ಥೆಯನ್ನೇ ತಮ್ಮ ರಾಜಕೀಯಕ್ಕಾಗಿ ಬಳಸಿಕೊಳ್ಳುವ ಪ್ರಯತ್ನ ರಾಜ್ಯ ಸರ್ಕಾರದ ಕಡೆಯಿಂದ ಎಗ್ಗಿಲ್ಲದೆ ನಡೆಯುತ್ತಿದೆ. ರಾಜ್ಯದಲ್ಲಿ ಅಪರಾಧದ ಸಂಖ್ಯೆ ಹೆಚ್ಚಳದಿಂದ ಜನರ ನೆಮ್ಮದಿ ಹಾಳಾಗುತ್ತಿದೆ ಎಂದು ಆರೋಪಿಸಿದರು.

**<><*<><>*><>**

ಪ್ರಜ್ವಲ್ ರೇವಣ್ಣ ಅವರನ್ನು ವಿದೇಶಕ್ಕೆ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರೇ ಕಳಿಸಿದ್ದಾರೆ ಎಂಬ ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪಕ್ಕೆ ಸಂಬಂಧಿಸಿದಂತೆ ಅವರ ವಿರುದ್ಧ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ವಾಗ್ದಾಳಿ ನಡೆಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾರಿಗೆ ಆಗಲಿ ನೋವು ನೋವೇ. ನಿಮ್ಮ ಕುಟುಂಬದಲ್ಲಿ ಒಂದು ಘಟನೆ ನಡೆದಿದೆ. ಆಗ ನಿಮ್ಮ ಮಗನನ್ನು ನೀವೇ ಕಳಿಸಿದಿರಾ? ಅವರ ಸಾವಿಗೆ ನೀವೇ ಕಾರಣರಾ? ಎಂದು ಪ್ರಶ್ನಿಸಿದರು. ರಾಜತಾಂತ್ರಿಕ ಪಾಸ್‌ಪೋರ್ಟ್‌ಗೆ ಸಂಬಂಧಿಸಿದಂತೆ ಇವರಿಗೆ ಕಾನೂನಿನ ತಿಳಿವಳಿಕೆಯೇ ಇಲ್ಲ. ಪ್ರಜ್ವಲ್‌ನನ್ನು ವಾಪಸ್ ಕರೆದುಕೊಂಡು ಬರಲು ಈಗ ಪತ್ರ ಬರೆದಿದ್ದಾರೆ. ರಾಜತಾಂತ್ರಿಕ ಪಾಸ್‌ಪೋರ್ಟ್ ರದ್ದು ಮಾಡಬೇಕು ಎಂದು ಕೇಳಿದ್ದಾರೆ. ತಕ್ಷಣಕ್ಕೆ ಅದು ಸಾಧ್ಯವಿಲ್ಲ ಎಂದು ಅವರು ಹೇಳಿದರು. ತಕ್ಷಣ ವಾಪಸ್ ಬಂದು ತನಿಖೆಗೆ ಹಾಜರಾಗುವಂತೆ ಪ್ರಜ್ವಲ್‌ಗೆ ಸಂದೇಶ ನೀಡಿದ್ದೇನೆ. ದೇವೇಗೌಡರು ಕೂಡ ಕೊನೆಯ ಎಚ್ಚರಿಕೆ ನೀಡಿದ್ದಾರೆ. ಆದರೆ, ದೇವೇಗೌಡರು ನೀಡಿದ ಎಚ್ಚರಿಕೆ ಬಗ್ಗೆ ಮುಖ್ಯಮಂತ್ರಿಗಳು ಹಗುರವಾಗಿ ಮಾತನಾಡುತ್ತಿದ್ದಾರೆ. ದೇವೆಗೌಡರ ಜತೆ ಇವರು ಕೂಡ ಕೆಲಸ ಮಾಡಿದ್ದಾರೆ. ಅವರು ಯಾವ ರೀತಿ ರಾಜಕಾರಣ ಮಾಡಿದ್ದಾರೆ ಎನ್ನುವುದು ಸಿದ್ದರಾಮಯ್ಯ ಅವರಿಗೆ ಗೊತ್ತಿಲ್ಲವೇ? ಎಂದರು.

**<><*<><>*><>**

ರಾಜ್ಯದ ಕರಾವಳಿ ಮತ್ತು ದಕ್ಷಿಣ ಒಳನಾಡಿನ ಹಲವೆಡೆ ಹಾಗೂ ಉತ್ತರಒಳನಾಡಿನ ಕೆಲವೆಡೆ ಭಾರೀ ಮಳೆಯಾಗಿದೆ. ದಕ್ಷಿಣಕನ್ನಡ ಜಿಲ್ಲೆಯ ಮುಲ್ಕಿಯಲ್ಲಿ ೧೯ ಸೆಂಟಿ ಮೀಟರ್, ಉಡುಪಿಯಲ್ಲಿ ೧೩, ಕುಶಾಲನಗರ ೧೦, ಕಳಸದಲ್ಲಿ ೯, ಆಗುಂಬೆಯಲ್ಲಿ ೮ ಸೆಂಟಿಮೀಟರ್ ಮಳೆಯಾಗಿದೆ. ಇದೇ ವೇಳೆ ತರಿಕೆರೆ, ಶೃಂಗೇರಿ, ನಾಯಕನಹಟ್ಟಿಯಲ್ಲಿ ತಲಾ ೭, ಹಾಗೂ ನಂಜನಗೂಡು, ಮಿಡಿಗೇಶಿ, ಬಾಳೆಹೊನ್ನೂರಿನಲ್ಲಿ ತಲಾ ೬ ಸೆಂಟಿಮೀಟರ್ ಮಳೆಯಾಗಿದೆ. ರಾಜ್ಯದಲ್ಲಿ ಅತಿ ಗರಿಷ್ಠ ಉಷ್ಣಾಂಶ ೪೦.೬ ಡಿಗ್ರಿ ಸೆಲ್ಸಿಯೆಸ್ ಚಿಕ್ಕನಹಳ್ಳಿಯಲ್ಲಿ ದಾಖಲಾಗಿದೆ. ಮುಂದಿನ ೨೪ ಗಂಟೆಗಳಲ್ಲಿ ಬೆಂಗಳೂರು ನಗರ, ಉತ್ತರಕನ್ನಡ, ರಾಮನಗರ, ಚಾಮರಾಜನಗರ, ಬೆಂಗಳೂರು ಗ್ರಾಮಾಂತರ, ಬಾಗಲಕೋಟೆ, ಬೆಳಗಾವಿ, ಧಾರವಾಡ, ಕಲಬುರಗಿ, ರಾಯಚೂರು, ವಿಜಯಪುರ, ಚಿಕ್ಕಬಳ್ಳಾಪುರ ಸೇರಿದಂತೆ ರಾಜ್ಯದ ಕೆಲವು ಜಿಲ್ಲೆಗಳಲ್ಲಿ ಗುಡುಗು ಸಹಿತ ಮಳೆಯಾಗುವ ಸಂಭವವಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೆಂಗಳೂರು ಸುತ್ತಮುತ್ತ ಮೋಡಕವಿದ ವಾತಾವರಣವಿದ್ದು, ಗುಡುಗು ಸಹಿತ ಸಾಧಾರಣೆ ಮಳೆಯಾಗುವ ಸಾಧ್ಯತೆಯಿದೆ. ಗರಿಷ್ಠ ತಾಪಮಾನ ೩೨, ಕನಿಷ್ಠ ೨೨ ಡಿಗ್ರಿ ಸೆಲ್ಸಿಯಸ್ ತಾಪಮಾನ ನಿರೀಕ್ಷಿಯಿದೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನಿನ್ನೆ ರಾತ್ರಿಯಿಂದ ಧಾರಾಕಾರ ಮಳೆಯಾಗಿದ್ದು, ಇಂದು ಬೆಳಗ್ಗೆ ಕೂಡ ಜಿಲ್ಲೆಯ ಹಲವೆಡೆ ಉತ್ತಮ ಮಳೆ ಸುರಿದಿದೆ. ಸತತ ಮಳೆಯಿಂದಾಗಿ ಬರಿದಾಗಿದ್ದ ನೇತ್ರಾವತಿ, ಕುಮಾರಧಾರಾ, ಫಲ್ಗುಣಿ ಸೇರಿದಂತೆ ಜಿಲ್ಲೆಯ ಪ್ರಮುಖ ನದಿಗಳಲ್ಲಿ ನೀರು ಹರಿಯುತ್ತಿದೆ. ನಗರಕ್ಕೆ ಕುಡಿಯುವ ನೀರು ಪೂರೈಸುವ ತುಂಬೆ ಅಣೆಕಟ್ಟೆನಲ್ಲಿ ನೀರಿನ ಪ್ರಮಾಣ ಏರಿಕೆಯಾಗಿರುವುದರಿಂದ, ನಿತ್ಯ ನೀರು ಪೂರೈಸಲಾಗುತ್ತಿದೆ. ಮಂಗಳೂರು, ಬಂಟ್ವಾಳ, ಉಪ್ಪಿನಂಗಡಿ, ಸುಳ್ಯ, ಕಡಬ, ಪುತ್ತೂರು, ಬೆಳ್ತಂಗಡಿ ಸೇರಿದಂತೆ ಹಲವೆಡೆ ನಿನ್ನೆ ರಾತ್ರಿ ಗುಡುಗು ಸಹಿತ ಉತ್ತಮ ಮಳೆಯಾಗಿದೆ. ಮುಲ್ಕಿ, ಸುರತ್ಕಲ್ ಪರಿಸರದಲ್ಲಿ ಒಂದು ಗಂಟೆಗೂ ಹೆಚ್ಚು ಕಾಲ ಸತತವಾಗಿ ಮಳೆಯಾಗಿದೆ.

**<><*<><>*><>**

ರಾಮೇಶ್ವರಂ ಕೆಫೆ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ ಮತ್ತೋರ್ವ ಆರೋಪಿಯನ್ನು ರಾಷ್ಟ್ರೀಯ ತನಿಖಾ ಸಂಸ್ಥೆ - ಎನ್ಐಎ ಬಂಧಿಸಿದೆ. ಹುಬ್ಬಳ್ಳಿಯ ೩೫ ವರ್ಷದ ಶೋಯಬ್ ಅಹಮದ್ ಮಿರ್ಜಾ, ಈ ಪ್ರಕರಣಕ್ಕೆ ಸಂಬಂಧಿಸಿದಂತೆ ೫ನೇ ಆರೋಪಿಯಾಗಿದ್ದಾನೆ. ಜೈಲಿನಿಂದ ಬಿಡುಗಡೆಯಾದ ನಂತರ ಶೋಯಬ್ ಮಿರ್ಜಾ, ರಾಮೇಶ್ವರಂ ಕೆಫೆ ಸ್ಫೋಟ ಪ್ರಕರಣದ ಆರೋಪಿ ಅಬ್ದುಲ್ ಮತೀನ್ ತಾಹಾನನ್ನು ಆನ್‌ಲೈನ್ ಮೂಲಕ ಸಂಪರ್ಕಿಸಿದ್ದ ಎಂದು ಎನ್ಐಎ ಮಾಹಿತಿ ನೀಡಿದೆ. ಕಳೆದ ಮಾರ್ಚ್‌ನಲ್ಲಿ ನಡೆದ ಕೆಫೆ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ ಇಲ್ಲಿಯವರೆಗೆ ದೇಶದ ೨೧ ವಿವಿಧ ಸ್ಥಳಗಳಲ್ಲಿ ಎನ್ಐಎ ವ್ಯಾಪಕ ಹುಡುಕಾಟ ನಡೆಸಿದೆ.

**<><*<><>*><>**

ರಾಜ್ಯದ ಕಾಂಗ್ರೆಸ್ ಸರಕಾರವು ರೈತರ ಪಾಲಿಗೆ ಇಲ್ಲವಾಗಿದೆ ಎಂದು ರಾಜ್ಯ ರೈತ ಮೋರ್ಚಾ ಅಧ್ಯಕ್ಷ ಎ.ಎಸ್.ಪಾಟೀಲ ನಡಹಳ್ಳಿ ಟೀಕಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ ಒಂದು ವರ್ಷದಿಂದ ಬರಗಾಲದಿಂದ ರೈತರು ತತ್ತರಿಸಿ ಹೋಗಿದ್ದಾರೆ. ಕೇಂದ್ರ ಸರಕಾರ, ಬರಗಾಲದ ಪರಿಹಾರ ಮೊತ್ತವನ್ನು ನೀಡಿದ್ದರೂ ೨ ಲಕ್ಷಕ್ಕಿಂತ ಹೆಚ್ಚು ರೈತರ ಖಾತೆಗಳಿಗೆ ಪಾವತಿಯಾಗಿಲ್ಲ. ಕೇಂದ್ರ ಸರ್ಕಾರ ನೀಡಿದ್ದರೂ ರಾಜ್ಯ ಸರ್ಕಾರದಿಂದ ಪಾವತಿ ಬಾಕಿಯಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದ್ದಾರೆ. ರಾಜ್ಯ ಸರ್ಕಾರ ಬಿತ್ತನೆ ಬೀಜಕ್ಕೂ ಅತಿ ಹೆಚ್ಚು ದರ ವಿಧಿಸುತ್ತಿದೆ.

ಮುಂಗಾರು ಸಂದರ್ಭದಲ್ಲಿ ಬೆಳೆಯುವ ಹೆಸರು, ಶೇಂಗಾ, ಉದ್ದು, ಮೆಕ್ಕೆಜೋಳ ಮೊದಲಾದ ಬಿತ್ತನೆ ಬೀಜಗಳ ದರವನ್ನು ಏರಿಸಲಾಗಿದೆ ಎಂದು ಎ.ಎಸ್.ಪಾಟೀಲ ನಡಹಳ್ಳಿ ಆರೋಪಿಸಿದ್ದಾರೆ.

**<><*<><>*><>**

ಮಂಡ್ಯ ಲೋಕಸಭಾ ಚುನಾವಣೆಯ ಮತ ಎಣಿಕೆ ಕಾರ್ಯ ಜೂನ್ ೪ರಂದು ನಡೆಯುವ ಹಿನ್ನಲೆಯಲ್ಲಿ ಸಿಬ್ಬಂದಿ ಉತ್ತಮ ರೀತಿಯಲ್ಲಿ ತರಬೇತಿ ಪಡೆದು ಯಾವುದೇ ಲೋಪದೋಷವಿಲ್ಲದೇ ಮತ ಎಣಿಕೆ ಕಾರ್ಯ ಯಶಸ್ವಿಗೊಳಿಸಬೇಕೆಂದು ಜಿಲ್ಲಾಧಿಕಾರಿ ಡಾ.ಕುಮಾರ ಸೂಚನೆ ನೀಡಿದ್ದಾರೆ.  ಈ ಸಂಬಂಧ ಇವಿಎಂ ಸಿಬ್ಬಂದಿಗೆ ನಡೆದ ತರಬೇತಿ ಶಿಬಿರದಲ್ಲಿ ಮಾತನಾಡಿದ ಅವರು, ಎಲ್ಲಾ ಮತ ಎಣಿಕೆ ಸಿಬ್ಬಂದಿಗೂ ಇವಿಎಂ ಬಳಕೆಯ ಅನುಭವವಿರುವುದರಿಂದ, ಭಯ ಪಡದೆ ಧೈರ್ಯ ಹಾಗೂ ಆತ್ಮ ವಿಶ್ವಾಸದಿಂದ ಕಾರ್ಯ ನಿರ್ವಹಿಸಿ. ಯಾವುದೇ ಲೋಪದೋಷಗಳಿಗೆ ಆಸ್ಪದ ಕೊಡಬೇಡಿ ಎಂದು ಅಧಿಕಾರಿಗಳಿಗೆ ನಿರ್ದೇಶಿಸಿದ್ದಾರೆ.

**<><*<><>*><>**

ದಾವಣಗೆರೆ ಜಿಲ್ಲೆಯಲ್ಲಿ ಆಗ್ನೇಯ ಶಿಕ್ಷಕರ ಕ್ಷೇತ್ರ ಮತ್ತು ನೈರುತ್ಯ ಶಿಕ್ಷಕರ ಹಾಗೂ ಪದವೀಧರರ ಕ್ಷೇತ್ರಕ್ಕೆ ಜೂನ್ ೩ ರಂದು  ಚುನಾವಣೆ ನಡೆಯುತ್ತಿದ್ದು, ಮತದಾರರಿಗೆ ಮತಚೀಟಿ ಹಾಗೂ ವೋಟರ್ ಗೈಡ್ ವಿತರಣೆ ಮಾಡುವಂತೆ ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ  ಅಧಿಕಾರಿಗಳಿಗೆ ಸೂಚಿಸಿದ್ದಾರೆ. ದಾವಣಗೆರೆಯ ಎಲ್ಲಾ ತಾಲೂಕುಗಳ ತಹಶೀಲ್ದಾರರು, ಕ್ಷೇತ್ರ ಶಿಕ್ಷಣಾಧಿಕಾರಿಗಳೊಂದಿಗೆ ವಿಡಿಯೋ ಸಂವಾದ ನಡೆಸಿದ ಅವರು, ಆಗ್ನೇಯ ಶಿಕ್ಷಕರ ಕ್ಷೇತ್ರಕ್ಕೆ ದಾವಣಗೆರೆ, ಹರಿಹರ, ಜಗಳೂರು ತಾಲೂಕುಗಳು ಮತ್ತು ನೈರುತ್ಯ ಶಿಕ್ಷಕರ ಹಾಗೂ ಪದವೀಧರರ ಕ್ಷೇತ್ರಕ್ಕೆ ಚನ್ನಗಿರಿ, ಹೊನ್ನಾಳಿ, ನ್ಯಾಮತಿ ತಾಲೂಕುಗಳು ಸೇರಲಿದೆ. ಇಲ್ಲಿನ ಮತದಾರರಿಗೆ ಮತ ಚೀಟಿ ಹಾಗೂ ವೋಟರ್ ಗೈಡ್ ವಿತರಣೆ ಮಾಡುವಂತೆ ನಿರ್ದೇಶಿಸಿದರು. ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರದಿಂದ ಕರ್ನಾಟಕ ವಿಧಾನ ಪರಿಷತ್ತಿಗೆ ದ್ವೈವಾರ್ಷಿಕ  ಚುನಾವಣೆ-೨೦೨೪ ರ ಸಂಬಂಧ ಜೂನ್ ೦೩ ರಂದು ಮತದಾನ ನಡೆಯಲಿದೆ. ಈ ಪ್ರಯುಕ್ತ ಚುನಾವಣೆಯು ಶಾಂತಿಯುತ, ನ್ಯಾಯಯುತ ಮತ್ತು ಮುಕ್ತವಾಗಿ ನಡೆಸಲು ಜೂನ್ ೦೧ ರ ಸಂಜೆ ೫ ಗಂಟೆಯಿಂದ ಜೂನ್ ೦೩ ರ ಮಧ್ಯರಾತ್ರಿಯವರೆಗೆ ಕೋಲಾರ ಜಿಲ್ಲೆಯಲ್ಲಿ ಮದ್ಯ ಮಾರಾಟ ಹಾಗೂ ಮದ್ಯಪಾನ ನಿಷೇಧಿಸಿ  ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಅಕ್ರಂ ಪಾಷ ಆದೇಶಿಸಿದ್ದಾರೆ. ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಎಲ್ಲಾ ವಿಧದ ಮದ್ಯದಂಗಡಿಗಳನ್ನು ಮುಚ್ಚುವಂತೆ ಹಾಗೂ ಕಟ್ಟುನಿಟ್ಟಿನ ಸೂಚನೆಗಳನ್ನು ಪಾಲಿಸುವಂತೆ ಜಿಲ್ಲಾಧಿಕಾರಿಗಳು ಆದೇಶದಲ್ಲಿ ತಿಳಿಸಿದ್ದಾರೆ.

**<><*<><>*><>**

ವಿಜಯನಗರ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿಗಳಾದ ಎಂ.ಎಸ್.ದಿವಾಕರ ಅವರು, ಇಂದು ವಿವಿಧ ಇಲಾಖೆಗಳ ಅಧಿಕಾರಿಗಳ ಸಭೆ ನಡೆಸಿದರು. ಈ ವೇಳೆ ಪ್ರಸಕ್ತ ಸಾಲಿನ ಮುಂಗಾರು ಹಾಗೂ ಪೂರ್ವ ಮುಂಗಾರು ಮಳೆ ಅವಧಿಯ ಪೂರ್ವ ಸಿದ್ಧತೆ ಸೇರಿದಂತೆ ನಾನಾ ವಿಷಯಗಳ ಕುರಿತು ಚರ್ಚಿಸಿದರು. ಪೂರ್ವ ಮುಂಗಾರು ಹಂಗಾಮಿನಲ್ಲಿ ಬಿತ್ತನೆ, ಬಿತ್ತನೆ ಬೀಜಕ್ಕೆ ಬೇಡಿಕೆ ಮತ್ತು ಲಭ್ಯತೆ, ರಸಗೊಬ್ಬರದ ಬೇಡಿಕೆ ಹಾಗೂ ಮೇವು ಬ್ಯಾಂಕ್ ಮತ್ತು ಗ್ರಾಮೀಣ ಕುಡಿಯುವ ನೀರು ಸರಬರಾಜು ಪರಿಸ್ಥಿತಿ ಸೇರಿದಂತೆ ನಾನಾ ವಿಷಯಗಳ ಬಗ್ಗೆ ಅಧಿಕಾರಿಗಳಿಂದ ಸಮಗ್ರ

ಮಾಹಿತಿ ಪಡೆದರು. ವಿಜಯನಗರ ಜಿಲ್ಲೆಯಲ್ಲಿ ಮೇ ೧ರಿಂದ ಮೇ ೨೨ರವರೆಗೆ ವಿವಿಧ ತಾಲೂಕುಗಳಲ್ಲಿ ವಾಡಿಕೆಗಿಂತ ಹೆಚ್ಚಿನ ಮಳೆ ಬಿದ್ದಿದೆ. ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನ ಸಹಾಯಧನದಲ್ಲಿ ಭತ್ತ, ಜೋಳ, ರಾಗಿ, ಮೆಕ್ಕೆಜೋಳ, ಸಜ್ಜೆ, ತೊಗರಿ, ಉದ್ದು, ಹೆಸರು, ಅಲಸಂದೆ, ನೆಲಗಡಲೆ, ಸೇರಿದಂತೆ ವಿವಿಧ ತಳಿಗಳ ಬಿತ್ತನೆ ಬೀಜಗಳನ್ನು ವಿತರಿಸುವಂತೆ ಇದೇ ವೇಳೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಸೂಚನೆ ನೀಡಿದರು.

**<><*<><>*><>**

ವಿಶ್ವ ತಂಬಾಕು ಮುಕ್ತ ದಿನಾಚರಣೆ ಹಿನ್ನಲೆಯಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಎಲ್ಲಾ ಶಾಲಾ-ಕಾಲೇಜು ಹಾಗೂ ಸರ್ಕಾರಿ ಕಚೇರಿಗಳನ್ನು ಮೇ ೩೧ ರ ಒಳಗಾಗಿ ತಂಬಾಕು ಮುಕ್ತಗೊಳಿಸಬೇಕಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಡಾ. ಎನ್.ಶಿವಶಂಕರ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ತಂಬಾಕು ಸೇವನೆಯಿಂದ ಆಗುವ ದುಷ್ಪರಿಣಾಮಗಳ ಕುರಿತು ಭಿತ್ತಿ ಪತ್ರಗಳು, ನಾಮಫಲಕಗಳನ್ನು ಶಾಲಾ-ಕಾಲೇಜು, ಆಸ್ಪತ್ರೆ, ಅಂಗಡಿ-ಮುಂಗಟ್ಟು, ಕೈಗಾರಿಕೆ ಸೇರಿದಂತೆ ವಿವಿಧ ಸಾರ್ವಜನಿಕ ಸ್ಥಳಗಳಲ್ಲಿ ಪ್ರದರ್ಶಿಸುವ ಮೂಲಕ ನಾಗರಿಕರಿಗೆ ಜಾಗೃತಿ ಮೂಡಿಸಬೇಕು. ಈ ಮೂಲಕ ತಂಬಾಕು ಸೇವನೆ ನಿಯಂತ್ರಿಸಲು ಹೆಚ್ಚು ಕಾರ್ಯ ಪ್ರವೃತ್ತರಾಗುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ನಿರ್ದೇಶಿಸಿದ್ದಾರೆ.

**<><*<><>*><>**

ಉತ್ತರ ಕನ್ನಡ ಜಿಲ್ಲೆಯಲ್ಲಿ ಬಾಲ ಕಾರ್ಮಿಕ ಪದ್ಧತಿಯನ್ನು ಸಂಪೂರ್ಣ ನಿರ್ಮೂಲನೆ ಮಾಡಿ, ಜಿಲ್ಲೆಯನ್ನು ಬಾಲ ಕಾರ್ಮಿಕ ಪದ್ಧತಿ ಮುಕ್ತ ಜಿಲ್ಲೆಯನ್ನಾಗಿ ಮಾಡಲು ಎಲ್ಲಾ ಇಲಾಖೆಗಳ ಅಧಿಕಾರಿಗಳು ಶ್ರಮಿಸಬೇಕು ಎಂದು ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ ಹೇಳಿದರು. ಕಾರವಾರದಲ್ಲಿ ನಡೆದ, ಜಿಲ್ಲಾ ಮಟ್ಟದ ಬಾಲ ಕಾರ್ಮಿಕ ಯೋಜನಾ ಸೊಸೈಟಿಯ, ಜಿಲ್ಲಾ ಮಟ್ಟದ ಕಾರ್ಯಪಡೆ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ೧೪ ವರ್ಷದೊಳಗಿನ ಮಕ್ಕಳು ಅಪಾಯಕಾರಿ ಉದ್ದಿಮೆ/ಕೈಗಾರಿಕೆಗಳಲ್ಲಿ ಹಾಗೂ ಅಪಾಯಕಾರಿ ಅಲ್ಲದ ಚಟುವಟಿಕೆಗಳಲ್ಲಿ ಕೆಲಸ ನಿರ್ವಹಿಸುತ್ತಿದ್ದಲ್ಲಿ ಅಂತಹ ಮಕ್ಕಳನ್ನು ಅಲ್ಲಿಂದ ಮುಕ್ತಗೊಳಿಸಿ, ಅವರಿಗೆ ವಿದ್ಯಾಭ್ಯಾಸ ಸೇರಿದಂತೆ ಎಲ್ಲಾ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸಿ, ಸಮಾಜದ ಮುಖ್ಯವಾಹಿನಿಗೆ ತರಲು ಕಾರ್ಮಿಕ ಇಲಾಖೆ, ಪೊಲೀಸ್, ಆರೋಗ್ಯ ಮತ್ತು ಶಿಕ್ಷಣ ಇಲಾಖೆಗಳು ಇನ್ನಷ್ಟು ಸಂಘಟಿತವಾಗಿ, ಪರಿಣಾಮಕಾರಿಯಗಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಹೇಳಿದ್ದಾರೆ.

**<><*<><>*><>**

ಈಗ ಸಕ್ಷಿಪ್ತಸುದ್ದಿಗಳು...

೧. ಮಳೆ-ಗಾಳಿ ಹಾಗೂ ಸಿಡಿಲು-ಮಿಂಚಿನಿಂದ ತಪ್ಪಿಸಿಕೊಳ್ಳಲು ಜನಸಾಮಾನ್ಯರು ಕೆ.ಎಸ್.ಎನ್.ಡಿ.ಎಂ.ಸಿ.ಯಲ್ಲಿ ಚಾಲ್ತಿಯಲ್ಲಿರುವ ವರುಣ ಮಿತ್ರ ಸಹಾಯವಾಣಿ ೯೨೪೩೩-೪೫೪೩೩ ಅನ್ನು ಸಂಪರ್ಕಿಸಿ ಹವಾಮಾನ ಮಾಹಿತಿ ಪಡೆದುಕೊಳ್ಳಬಹುದು ಎಂದು ಹಾವೇರಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷ ರಘುನಂದನ್ ಮೂರ್ತಿ ತಿಳಿಸಿದ್ದಾರೆ.

೨. ವಿದ್ಯಾರ್ಥಿ ಜೀವನದಲ್ಲಿ ಪುಸ್ತಕದ ಜ್ಞಾನದೊಂದಿಗೆ ವಾಸ್ತವ ಜಗತ್ತಿಗೆ ಹತ್ತಿರವಾಗಿ ಮುಂದಿನ ಉತ್ತಮ ಜೀವನ ರೂಪಿಸುವ ಹಂತವಾಗಿ ಎಲ್ಲ ಇಲಾಖೆಗಳ ಜ್ಞಾನವನ್ನು ಹೊಂದುವುದು ಬಹಳ ಮುಖ್ಯವಾಗಿದೆ ಎಂದು ಹಾವೇರಿ ಜಿಲ್ಲೆ ಸವಣೂರು ಪೊಲೀಸ್ ಠಾಣೆ ಸಬ್‌ಇನ್ಸ್‌ಪೆಕ್ಟರ್ ಪ್ರಮೀಳಮ್ಮ ಹೇಳಿದ್ದಾರೆ. ಸವಣೂರಿನಲ್ಲಿ ಏರ್ಪಡಿಸಿದ್ದ 'ತೆರೆದ ಮನೆ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು

**<><*<><>*><>**

ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿ ಕೊನೆಯ ಹಂತ ತಲುಪಿದ್ದು, ನಾಳೆ ಕೋಲ್ಕತ್ತಾ ನೈಟ್ ರೈಡರ್ಸ್ ಹಾಗೂ ಸನ್‌ರೈಸರ್ಸ್ ಹೈದರಾಬಾದ್ ನಡುವೆ ಫೈನಲ್ ಪಂದ್ಯ ನಡೆಯಲಿದೆ. ಚೆನ್ನೈನ ಎಂ.ಎ. ಚಿದಂಬರಂ ಕ್ರೀಡಾಂಗಣದಲ್ಲಿ ನಡೆಯಲಿರುವ ಈ ಪಂದ್ಯ ನಾಳೆ ಸಂಜೆ ೭.೩೦ಕ್ಕೆ ಆರಂಭವಾಗಲಿದೆ. ಲೀಗ್ ಹಂತದಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿ, ಅಂಕಪಟ್ಟಿಯಲ್ಲಿ ಪ್ರಥಮ ಸ್ಥಾನದೊಂದಿಗೆ ಪ್ಲೇ ಆಫ್ ಹಂತ ತಲುಪಿದ ಕೋಲ್ಕತ್ತಾ, ಮೊದಲ ಕ್ವಾಲಿಫೈಯರ್‌ನಲ್ಲಿ ಗೆಲುವು ಸಾಧಿಸಿ, ಫೈನಲ್ ಪ್ರವೇಶಿಸಿದ ಮೊದಲ ತಂಡವಾಗಿದೆ. ಇದೇ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಎರಡನೇ ಕ್ವಾಲಿಫೈಯರ್ ಪಂದ್ಯದಲ್ಲಿ ರಾಜಸ್ತಾನ್ ರಾಯಲ್ಸ್ ವಿರುದ್ಧ ಸನ್ ರೈಸರ್ಸ್ ಹೈದರಾಬಾದ್ ೩೬ ರನ್‌ಗಳ ಗೆಲುವು ದಾಖಲಿಸಿ, ಫೈನಲ್ ಪಂದ್ಯಕ್ಕೆ ಪ್ರವೇಶ ಪಡೆದಿದೆ.

**<><*<>** ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು **<>*><>**

**<><*<>** ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ **<>*><>**